ಕಲ್ಯಾಣ ನಗರದಲ್ಲಿ ನಿರ್ಮಿಸುತ್ತಿರುವ ಗ್ರಂಥಾಲಯ ಕಟ್ಟಡದ ಕಾಮಗಾರಿ

694 (177) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞ ನಗರ), : ಮಾನ್ಯ ಪಶುಸಂಗೋಪನೆ, ಗ್ರಂಥಾಲಯ ಮತ್ತು ಸಣ್ಣ ಉಳಿತಾಯ, ಲಾಟರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞ ನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 27ರ ಕಲ್ಯಾಣ ನಗರದಲ್ಲಿ ಗ್ರಂಥಾಲಯದ ಕಟ್ಟಡ ನಿಮಾಣದ ಕಾರ್ಯ ಹಣಕಾಸಿನ ಮುಗ್ಗಟ್ಟಿನಿಂದ ಪೂರ್ಣಗೊಳಿಸದೆ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ಗ್ರಂಥಾಲಯ ನಿರ್ಮಾಣದ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು (ವಿವರ ನೀಡುವುದು)?

ಶ್ರೀ ರೇವೂ ನಾಯಕ ಬೆಳಮಗಿ (ಪಶುಸಂಗೋಪನೆ, ಗ್ರಂಥಾಲಯ ಮತ್ತು ಸಣ್ಣ ಉಳಿತಾಯ, ಲಾಟರಿ ಸಚಿವರು) :

ಅ) ಸರ್ವಜ್ಞ ನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 27 ಕಲ್ಯಾಣ ನಗರ ಹೆಚ್.ಆರ್.ಬಿ.ಆರ್. ಬಡಾವಣೆಯಲ್ಲಿ ಕಟ್ಟಲಾಗುತ್ತಿರುವ ಗ್ರಂಥಾಲಯ ಕಟ್ಟಡವು ಹಣಕಾಸಿನ ಕೊರತೆಯಿಂದ ಅಪೂರ್ಣಗೊಂಡಿರುತ್ತದೆ. ಕಟ್ಟಡವು ಶಿಥಿಲಗೊಂಡಿರುವುದಿಲ್ಲ.

ಆ) ಹಣಕಾಸಿನ ಕೊರತೆ ಇರುವುದರಿಂದ ಈ ಕಟ್ಟಡದ ನೆಲಮಹಡಿಯನ್ನು ಮಾತ್ರ ಯಥಾಸ್ಥಿತಿಯಲ್ಲಿ ಪೂರ್ಣಗೊಳಿಸಲು ರೂ.99.00 ಲಕ್ಷಗಳ ಅಂದಾಜು ವೆಚ್ಚಗಳಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮವಹಿಸಲಾಗುತ್ತಿದೆ.

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢ ಶಾಲೆ ಪ್ರಾರಂಭ

695 (178) ಶ್ರೀ ಜಾರ್ಜ್ ಕೆ.ಜೆ. (ಸರ್ವಜ್ಞನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮವನ್ನು ತೆಗೆದುಕೊಳ್ಳಲಾಗಿದೆ (ವಿವರ ನೀಡುವುದು);

ಇ) ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ. 27ರ ಬಾಣಸವಾಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಉನ್ನತೀಕರಿಸಿ ಪ್ರೌಢ ಶಾಲೆಯನ್ನು ತೆರೆಯಲು ಮನವಿಗಳು ಈಗಾಗಲೇ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಸದರಿ ಶಾಲೆಯನ್ನು ಉನ್ನತೀಕರಿಸಿ ಸರ್ಕಾರಿ ಪ್ರೌಢಶಾಲೆಯನ್ನು ಪ್ರಾರಂಭಿಸುವ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು (ವಿವರ ನೀಡುವುದು);

ಉ) ರಾಜ್ಯದ ಯೋಜನೆಯಡಿ ಸರ್ಕಾರಿ ಪ್ರೌಢಶಾಲೆ ತೆರೆಯಲು ಸರ್ಕಾರವು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು ಬಂದಿರುತ್ತದೆ.

ಆ) ಆರ್.ಎಂ.ಎಸ್.ಎ ನಿಗದಿಪಡಿಸಿರುವ ನಿಯಮಗಳಂತೆ ಎಲ್ಲಾ ಷರತ್ತುಗಳನ್ನು ಪೂರೈಸಿದಲ್ಲಿ ಕೇಂದ್ರ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗುವುದು.

ಇ) ಬಂದಿದೆ.

ಈ) ಸದರಿ ಶಾಲೆಯ 8ನೇ ತರಗತಿಯಲ್ಲಿ 30 ಮಕ್ಕಳು ಮಾತ್ರ ವ್ಯಾಸಂಗ ಮಾಡುತ್ತಿದ್ದಾರೆ. ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದಡಿಯಲ್ಲಿ ಹಿರಿಯ ಪ್ರಾಥಮಿಕ ಶಾಲೆಯನ್ನು ಉನ್ನತೀಕರಿಸಲು ಕನಿಷ್ಟ 70 ಮಕ್ಕಳು ಅವಶ್ಯಕತೆ ಇರುವುದರಿಂದ ಹಾಗು 5 ಕಿ.ಮೀ. ವ್ಯಾಪ್ತಿಯಲ್ಲಿ 3 ಅನುದಾನಿತ ಪ್ರೌಢಶಾಲೆಗಳು ಇರುವುದರಿಂದ ಸದರಿ ಶಾಲೆಯನ್ನು ಉನ್ನತೀಕರಿಸಲು ಪರಿಗಣಿಸಿರುವುದಿಲ್ಲ.

ಉ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದಡಿಯಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಉನ್ನತೀಕರಿಸುತ್ತಿರುವುದರಿಂದ ರಾಜ್ಯದ ಯೋಜನೆಯಡಿಯಲ್ಲಿ ಪ್ರೌಢಶಾಲೆಗಳನ್ನು ತೆರೆಯಲು ಕ್ರಮವಹಿಸುತ್ತಿರುವುದಿಲ್ಲ.